# TALUK LEGAL SERVICES COMMITTEE HOLALKERE.

| Office of the Chairman, Taluk Legal Services Committee. Holalkere. P No.08191-276215. | Office of the Member Secretary, Taluk Legal Services Committee. Holalkere. P No.08191-275084. |
|---|---|

No. TLSC/HLK/ADM (RTI)03/2023. Date :- 11.06.2024

## NOTIFICATION

In exercise of the powers conferred under section 4(b) 5(1) and 19(1) of the Right to Information Act, 2005 (Central Act No.22 of 2005) the detailed information relating to the Taluk Legal Services Committee is published hereunder, for the information of general public and the Hon'ble Chairman of Taluk Legal Services Committee has been pleased to designate the officers mentioned in column No.(xvi) of this Notification as Public Information Officer and Appellant Authority respectively to come in to effect immediately.

| | |
|---|---|
| (I) Particulars of organization functions and duties | Organization: Taluk Legal Services Committee<br>**Functions and Duties**<br>(1) To create legal awareness in the people<br>(2) To offer free legal aid and advice for eligible persons<br>(3) To provide justice to the affected persons quickly and in low cost by settling cases (litigations) through Janata Nyayalayas (Lok-Adalaths).<br>(4) Services of Legal Aid Lawyers to provide legal aid and advice.<br>(5) Para Legal Volunteers to assist Legal aid lawyers and to help the litigants in filing up forms from legal aid etc.,<br>(6) Front Office for providing free legal aid and advice for eligible persons through Panel Advocates and PLVs. |

| | |
|---|---|
| (ii) Powers and duties of its officers and employees | Details are as at Annexure I |
| (iii) Procedure followed in the decision making process, including channels of supervision and accountability. | Case worker will open a file on receipt of proposal and process the proposal in the existing file. He will scrutinize the same and place it before the Member Secretary. Then Member Secretary will review the proposal in light of existing provisions/rules and will decide the course of action. If necessary, he will submit the file before Hon'ble Chairman, TLSC for necessary orders. |
| (iv) Norms set by the Authority for discharge of its functions | Depending on urgency proposal will be finalized on priority. |
| (v) Rules, regulations, instructions, manuals and records, held by it or under its control | Details are as at Annexure-II |
| (vi) A Statement of the categories of documents that are held by the Authority or under its control | Files and relevant Registers are maintained |
| (vii) Particulars of any arrangement that exists for consultation with or representation by, the members of the public in relation to the formulation of its policy or implementation thereof | Member Secretary will provide information |
| (viii) A Statement of the boards councils, committees and other bodies consisting of two or more persons constituted as its part of for the purpose of its advice and as to whether meetings of those boards, councils, committees and other bodies are open to the public, or the minutes of such meetings are accessible for public | Meetings of the Committee are not open to the public and the minutes of such meetings are not accessible to public |
| (ix) A directory of its officer | Directory of officer is maintained |
| (x) Monthly remuneration received by each of its officers and employees, including the system of compensation as provided in its regulations | As per the scale of pay of their post mentioned in Schedule – I of Karnataka State Legal Services Authorities Rules. |
| (xi) Budget allocated to each of its agency, indicating the particulars of all | Allotment of the budget to the Committee is under plan and non-plans scheme of the |

| | |
|---|---|
| plans, proposed expenditures and reports on disbursements made | Karnataka State Legal Services Authority. |
| (xii) Manner of execution of subsidy programmes, including the amounts allocated and the details of beneficiaries of such programmes | As per the scheme of the Act and Rules framed there under. |
| (xiii) Details in respect of the information, available to or held by it reduced in an electronic form | Available in<br>**https://chitradurga.dcourts.gov.in/dlsa-tlsa/** |
| (xiv) Particulars of facilities available to citizens for obtaining information, including the working hours of a library or reading room, if maintained for public use.<br>(xv) The name and designation and other particulars of the Public Information Officer. | Public may approach the office during working hours, on all working days.<br>Sri.Umesh M.P<br>Member Secretary,<br>Taluk Legal Services Committee,<br>Taluk Court Complex, Holakere,<br>08191-275084 |
| (xvi) (a) Appellant Authority under Sec.19 (1) of Right to Information Act.<br>(b) Member Secretary of District Legal Services Authority U/s 5(2) of Right to Information Act.<br>(c) Member Secretary of Taluka Legal Services Committee U/s 5(2) of Right to Information Act. | Member Secretary, Karnataka State Legal Services Authority.<br>Tel. No: 080-2111714<br>Member Secretary, District Legal Services Authority, Chitradurga.<br>Tel. No: 08194-222322.<br>Member Secretary<br>Taluka Legal Servicec Committee of District of Chitradurga – as State Assistant Information Officer. |
| (xvii) Such other information as may be prescribed | - NIL - |

Individual files cannot be uploaded since they are concerned with personal matters of the litigants.

By order of the Hon'ble
Chairman.

Member Secretary and
Public Information Officer.

## ANNEXURE-I

**The powers and duties of the Officers and employees of the Taluk Legal Services committee.**

| | |
|---|---|
| Peons<br>Attenders | To keep the office neat and tidy<br>To deliver the files/tappals to other sections<br>(Permanent posts are not sanctioned. Hence, Employees are working under contract basis) |
| Typist | --- |
| Case Workers | --- |
| Clark com Typist | To attend to the job of case working as per the duties cast on them, i.e., Lok-Adalath, providing Legal-Aid, Conducting Legal Literacy Programmes, Victim Compensation and Monitoring Committees, etc.,<br><br>In charge of receipt of tappals/files by the Hon'ble Executive Chairman and Member Secretary and typing work entrusted by the Member Secretary.<br>(working under contract basis) |
| Sheristedar | --- |
| Member Secretary | Heads of the organization Acts, in their capacity as Head of the Departments upon the advice/directions of the Hon'ble Chairman, District Legal Service Committee |

# ANNEXURE-II

## The rules, regulations, instructions, manuals and records, held by it or under its control or used by its employees for its function:

**(a) Acts**:

1. The Legal Services Authorities Act 1987 (As amended by the Legal Services Authorities (Amendment) Act, 2002)

2. The Karnataka State Legal Services Authorities Rules 1996.

3. The Karnataka State Legal Services Authorities Regulation 1997.

**(b) Rules**:

1. The Karnataka Civil Services Rules.

2. The Karnataka Financial Code, 1958.

3. The Karnataka Civil Services (Medical Attendance) Rules 1963.

4. The Karnataka Civil Services (Performance Reports) Rules, 1994.

**(c) Instructions, Manuals and others.**

1. The Criminal Procedure Code.

2. The Civil Procedure Code.

# ತಾಲ್ಲೂಕು ಕಾನೂನು ಸೇವಾ ಸಮಿತಿ,

ನ್ಯಾಯಾಲಯದ ಆವರಣ, ಹೊಳಲ್ಕೆರೆ – 577526

ಮಾಹಿತಿ ಹಕ್ಕು ಅಧಿನಿಯಮ, 2005 ರ ಪ್ರಕರಣ 4 ರಡಿಯಲ್ಲಿ ಮಾಹಿತಿ ವಿವರ

ಕಛೇರಿ ಹೆಸರು ಮತ್ತು ವಿಳಾಸ – ತಾಲ್ಲೂಕು ಕಾನೂನು ಸೇವಾ ಸಮಿತಿ,
ನ್ಯಾಯಾಲಯದ ಆವರಣ,
ಹೊಳಲ್ಕೆರೆ.

ಕಛೇರಿ ದೂರವಾಣಿ ಸಂಖ್ಯೆ - 08191 -275084

ಕಛೇರಿ ಇ-ಮೇಲ್ ವಿವರ -jmfcholalkere@gmail.com

Website: https://chitradurga.dcourts.gov.in/dlsa-tlsa/

## ತಾಲ್ಲೂಕು ಕಾನೂನು ಸೇವಾ ಸಮಿತಿಯ ಧ್ಯೇಯೋದ್ದೇಶಗಳು–

* ಸಾರ್ವಜನಿಕರಲ್ಲಿ ಕಾನೂನಿನ ಬಗ್ಗೆ ಅರಿವನ್ನು ಉಂಟು ಮಾಡುವುದು (ಅರಿವು–ನೆರವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರೊಂದಿಗೆ).
* ಉಚಿತ ಕಾನೂನು ನೆರವು ಮತ್ತು ಸಲಹೆಯನ್ನು ನೀಡುವುದು.
* ಜನತಾ ನ್ಯಾಯಾಲಯ (ಲೋಕ್ ಅದಾಲತ್)ಗಳ ಮೂಲಕ ಪ್ರಕರಣಗಳನ್ನು ಇತ್ಯರ್ಥಗೊಳಿಸಿ ಜನರಿಗೆ ತ್ವರಿತವಾಗಿ ಮತ್ತು ಕಡಿಮೆ ಖರ್ಚಿನಲ್ಲಿ ನ್ಯಾಯ ದೊರಕಿಸಿಕೊಡುವುದು.

## ತಾಲ್ಲೂಕು ಕಾನೂನು ಸೇವಾ ಸಮಿತಿಯಿಂದ ಉಚಿತವಾಗಿ ದೊರಕುವ ಸೇವೆಗಳು:–

* ಉಚಿತ ಕಾನೂನು ಸೇವೆಗಳು (ನಿಶ್ಚಿತ ವರ್ಗಗಳವರಿಗೆ) ಹಾಗೂ ವಾರ್ಷಿಕ ಆದಾಯ ರೂ. 3 ಲಕ್ಷಗಳಿಗಿಂತ ಕಡಿಮೆ ಹೊಂದಿರುವವರಿಗೆ.
* ಉಚಿತ ಕಾನೂನು ಸಲಹೆ.
* ರಾಜೀ ಸಂಧಾನ
* ಜನತಾ ನ್ಯಾಯಾಲಯ ಮೂಲಕ ನ್ಯಾಯಾಲಯಗಳಲ್ಲಿರುವ ಪ್ರಕರಣಗಳ ಇತ್ಯರ್ಥ
* ಮಧ್ಯಸ್ಥಿಕೆ ಕೇಂದ್ರಗಳ ಮೂಲಕ ಸಂಧಾನ ವ್ಯವಸ್ಥೆ
* ವ್ಯಾಜ್ಯಪೂರ್ವ ಸಮಸ್ಯೆಗಳ ಪರಿಹಾರ

* ಕಾನೂನು ಸಾಕ್ಷರತೆ/ಕಾನೂನು ಅರಿವು-ನೆರವು

*ಖಾಯಂ ಜನತಾ ನ್ಯಾಯಾಯ (P.L.A) ಮುಖಾಂತರ ಕೆಲವು ಸಾರ್ವಜನಿಕ ಉಪಯುಕ್ತ ಸೇವೆಗಳಿಗೆ ಸಂಬಂಧಿಸಿದ ಪ್ರಕರಣಗಳ ಇತ್ಯರ್ಥ

**ಉಚಿತ ಕಾನೂನು ಸಲಹೆ ಮತ್ತು ಸೇವೆ/ನೆರವನ್ನು ಪಡೆಯಲು ಅರ್ಹರುಃ-**

* ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರು.
* ಮಹಿಳೆಯರು ಮತ್ತು ಮಕ್ಕಳು.
* ಕಾರ್ಖಾನೆಯ ಕಾರ್ಮಿಕರು
* ಗುಂಪು ಘರ್ಷಣೆ, ಗಲಭೆ, ಪ್ರವಾಹ, ಕ್ಷಾಮ, ಭೂಕಂಪ, ಕೈಗಾರಿಕಾ ವಿನಾಶ ಮುಂತಾದವುಗಳಿಗೆ ತುತ್ತಾದವರು.
* ಮತೀಯ ಗಲಭೆಯ ಕಾರಣದಿಂದ ದೌರ್ಜನ್ಯಕ್ಕೆ ಹೊಂದಿದವರು.
* ರಕ್ಷಣಾ ಗೃಹ, ಮನೋರೋಗಿಗಳ ಆಸ್ಪತ್ರೆ ಮುಂತಾದವುಗಳಲ್ಲಿ ಅಭಿರಕ್ಷೆಯಲ್ಲಿರುವವರು.



* ದೈಹಿಕ ವ್ಯಾಪಾರ ಅಥವಾ ಜೀತಕ್ಕೊಳಗಾದವರು ಮತ್ತು

*ವಾರ್ಷಿಕ ಆದಾಯ ಮೂರು ಲಕ್ಷ ರೂಪಾಯಿಗಳಿಗಿಂತ ಕಡಿಮೆ ಇರುವ ಎಲ್ಲಾ ವರ್ಗದ ಜನರು ಉಚಿತ ಕಾನೂನು ಸೇವೆಯನ್ನು ಪಡೆಯಲು ಅರ್ಹರಿರುತ್ತಾರೆ.

* ಸರ್ವೋಚ್ಛ ನ್ಯಾಯಾಲಯದಲ್ಲಿ ಕಾನೂನು ಸೇವೆಯನ್ನು ಪಡೆಯಲು ವಾರ್ಷಿಕ ಆದಾಯ ಐದು ಲಕ್ಷಗಳಿಗಿಂತ ಕಡಿಮೆ ಇರುವ ಎಲ್ಲಾ ವರ್ಗದ ಜನರು ಉಚಿತ ಕಾನೂನು ಸೇವೆಯನ್ನು ಪಡೆಯಲು ಅರ್ಹರಿರುತ್ತಾರೆ.

* ಉಚಿತ ಕಾನೂನು ನೆರವು ಎಂದರೆ ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ ವಕೀಲರ ಫೀಸು ಮತ್ತು ನ್ಯಾಯಾಲಯ ಶುಲ್ಕ ಹಾಗೂ ಇತರೆ ವೆಚ್ಚಗಳನ್ನು ಸಂಪೂರ್ಣವಾಗಿ ಜಿಲ್ಲಾ ಪ್ರಾಧಿಕಾರದಿಂದಲೇ ಭರಿಸಲಾಗುವುದು.

* ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದವರು ಕಾನೂನು ಸೇವೆಗಳ ಹಾಗೂ ರಾಜ್ಯ ಪ್ರಾಧಿಕಾರದ ಮಾರ್ಗದರ್ಶನದಂತೆ ಜಿಲ್ಲಾ ಕೇಂದ್ರದಲ್ಲಿರುವ ಬಾಲ ನ್ಯಾಯ ಮಂಡಳಿಯ ರಕ್ಷೆಯಲ್ಲಿರುವ ಮಕ್ಕಳು ಉಚಿತ ಕಾನೂನು ಸೇವೆಯನ್ನು ಪಡೆಯಬಹುದಾಗಿರುತ್ತದೆ. ಈ ನ್ಯಾಯ ಮಂಡಳಿಯಲ್ಲಿರುವ ಮಕ್ಕಳ ಸಮಸ್ಯೆಗಳ ಬಗ್ಗೆ ನುರಿತ ವಕೀಲರಿಂದ ಸಮಸ್ಯೆಗಳನ್ನು ಪರಿಹರಿಸುವ ಕ್ರಮ, ಮಕ್ಕಳ ಸಂರಕ್ಷಣೆ ಇತರೆ ವ್ಯವಸ್ಥೆಯನ್ನು ಜಿಲ್ಲಾ ಪ್ರಾಧಿಕಾರದ ಮೂಲಕ ವ್ಯವಸ್ಥೆ ಮಾಡಲಾಗುವುದು.

* ವಿಚಾರಣಾಧೀನ ಖೈದಿಗಳಿಗೆ ಉಚಿತ ಕಾನೂನು ಸೇವೆಗಳನ್ನು ನೀಡಲಾಗುವುದು.

**ಕರ್ನಾಟಕ ಸಂತ್ರಸ್ಥರ ಪರಿಹಾರ ಯೋಜನೆಃ**

* ಕರ್ನಾಟಕ ಸಂತ್ರಸ್ಥರ ಪರಿಹಾರ ಯೋಜನೆ 2011 ರಡಿಯಲ್ಲಿ ಅಂದರೆ ಭಾರತೀಯ ದಂಡ ಸಂಹಿತೆ ಕಲಂ 357 ರಡಿಯಲ್ಲಿ ಅಪರಾಧದಿಂದ ವೈಯುಕ್ತಿಕ ಮತ್ತು ಆಸ್ತಿಗೆ ಸಂಬಂಧಪಟ್ಟಂತೆ ನಷ್ಟ ಮತ್ತು ಹಾನಿಯನ್ನು ಅನುಭವಿಸಿದ ಸಂತ್ರಸ್ಥರು ಮತ್ತು ಅವರ ಅವಲಂಬಿತರಿಗೆ ಪರಿಹಾರ ಮತ್ತು ಪುನರ್ವಸತಿ ಒದಗಿಸುವ ಸಲುವಾಗಿ "ಸಂತ್ರಸ್ಥರ

ಪರಿಹಾರ ಯೋಜನೆ"'. ಕರ್ನಾಟಕ ಸರ್ಕಾರವು ಹೊರಡಿಸಿರುವ ಅಧಿಸೂಚನೆ ಸಂಖ್ಯೆ: HD 1 PCB 2011 ಬೆಂಗಳೂರು, ದಿನಾಂಕ: 22.02.2012 ರನ್ವಯ ಅಪರಾಧದಿಂದ ನಷ್ಟ ಮತ್ತು ಹಾನಿಯನ್ನು ಅನುಭವಿಸಿದ ಸಂತ್ರಸ್ಥರು ಮತ್ತು ಅವರ ಅವಲಂಬಿತರು ಪರಿಹಾರ ಧನವನ್ನು ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಅರ್ಜಿಯನ್ನು ಸಲ್ಲಿಸಿ ಪರಿಹಾರ ಪಡೆಯಬಹುದಾಗಿದೆ.

## ಉಚಿತ ಕಾನೂನು ಸಲಹಾ ಕೇಂದ್ರಗಳು:

ಸಾರ್ವಜನಿಕರಿಗಾಗಿ ತಾಲ್ಲೂಕು ಸಮಿತಿಯು ಈ ಕೆಳಕಂಡ ಸ್ಥಳಗಳಲ್ಲಿ ಉಚಿತ ಕಾನೂನು ಸಲಹಾ ಕೇಂದ್ರ ಸೇವೆಯನ್ನು ಪ್ರಾರಂಭಿಸಲಾಗಿದ್ದು, ಈ ಕೇಂದ್ರಗಳ ಮೂಲಕ ಸಾರ್ವಜನಿಕರು ದಿನನಿತ್ಯದ ಕಾನೂನು ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ.

## ಉಚಿತ ಕಾನೂನು ಸಲಹಾ ಕೇಂದ್ರಗಳ ವಿವರ:-

* ಫ್ರಂಟ್ ಆಫೀಸ್, ಕೋರ್ಟ್ ಕಾಂಪ್ಲೆಕ್ಸ್, ಹೊಳಲ್ಕೆರೆ.
* ತಹಶೀಲ್ದಾರ್ ಕಛೇರಿ, ಹೊಳಲ್ಕೆರೆ.
* ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ಹೊಳಲ್ಕೆರೆ.
* ಗ್ರಾಮೀಣ ಸಲಹಾ ಕೇಂದ್ರ, ಚಿಕ್ಕಜಾಜೂರು, ಹೊಳಲ್ಕೆರೆ.

## ಜನತಾ ನ್ಯಾಯಾಲಯ (ಲೋಕ್ ಅದಾಲತ್)ಗಳು:-

* ಪ್ರಕರಣವೊಂದರ ಉಭಯ ಪಕ್ಷಗಳವರಲ್ಲಿ ರಾಜೀ ಸಂಧಾನ ಏರ್ಪಡಿಸುವ ಮೂಲಕ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಉದ್ದೇಶದಿಂದ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ನ್ಯಾಯಾಲಯದ ಅಥವಾ ತಾಲ್ಲೂಕು ಕಾನೂನು ಸೇವೆಗಳ ಸಮಿತಿ ರಚಿಸುವ ನ್ಯಾಯಾಲಯವೇ ಜನತಾ ನ್ಯಾಯಾಲಯ (ಲೋಕ್ ಅದಾಲತ್)

ಜನತಾ ನ್ಯಾಯಾಲಯಗಳಲ್ಲಿ ಎಂತಹ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗುತ್ತದೆ?
ನ್ಯಾಯಾಲಯಗಳಲ್ಲಿ ಇತ್ಯರ್ಥಕ್ಕಾಗಿ ಬಾಕಿ ಇರುವ
*ವೈವಾಹಿಕ ಅಥವಾ ಜೀವನಾಂಶ ಪ್ರಕರಣಗಳು, ಕಾನೂನಿನನ್ವಯ ರಾಜೀ ಆಗಬಹುದಾದ ಕ್ರಿಮಿನಲ್ ಪ್ರಕರಣಗಳು.



*ಕಾರ್ಮಿಕ ನಷ್ಟ ಪರಿಹಾರ ಪ್ರಕರಣಗಳು.
*ಗ್ರಾಹಕರ ವಿವಾದಗಳಿಗೆ ಸಂಬಂಧಿಸಿದ ಪ್ರಕರಣಗಳು.
* ರಾಜೀ ಆಗಬಹುದಾದ ಎಲ್ಲಾ ವಿಧದ ಪ್ರಕರಣಗಳನ್ನು ಜನತಾ ನ್ಯಾಯಾಲಯಗಳ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದು.

**ಜನತಾ ನ್ಯಾಯಾಲಯಗಳ ವೈಶಿಷ್ಟ:**

* ವ್ಯಾಜ್ಯವನ್ನು ಜನತಾ ನ್ಯಾಯಾಲಯದ (ಲೋಕ್ ಅದಾಲತ್ ನ) ಮೂಲಕ ಶೀಘ್ರವಾಗಿ ಇತ್ಯರ್ಥಗೊಳಿಸಿಕೊಳ್ಳಬಹುದು.
* ಇಲ್ಲಿ ಯಾವುದೇ ಕೋರ್ಟ್ ಫೀ (ನ್ಯಾಯಾಲಯ ಶುಲ್ಕ) ಪಾವತಿಸುವಂತಿರುವುದಿಲ್ಲ.
* ಜನತಾ ನ್ಯಾಯಾಲಯದಲ್ಲಿ ನೀವು ವಕೀಲರ ಮುಖಾಂತರವೇ ಭಾಗವಹಿಸಬೇಕೆನ್ನುವ ನಿಯಮವೇನೂ ಇಲ್ಲ. ನೀವೇ ನೇರವಾಗಿ ಭಾಗವಹಿಸಬಹುದು.
* ನಿಮ್ಮ ಪ್ರಕರಣದಲ್ಲಿ ನಿಮಗೆ ಮಾರ್ಗದರ್ಶನ ನೀಡಿ ರಾಜೀ ಸಂಧಾನ ಏರ್ಪಡಿಸಲು ಜನತಾ ನ್ಯಾಯಾಲಯದಲ್ಲಿ ಕನಿಷ್ಟ ಇಬ್ಬರು ಸಂಧಾನಕಾರರಿದ್ದು ಅವರಲ್ಲಿ ಒಬ್ಬರು ನ್ಯಾಯಾಧೀಶರೇ ಆಗಿರುತ್ತಾರೆ.
* ಸಂಧಾನಕಾರರು ಸೂಚಿಸುವ ಪರಿಹಾರ ನಿಮಗೆ ತೃಪ್ತಿಯಾದಲ್ಲಿ ಮಾತ್ರ ನೀವು ರಾಜಿ ಮಾಡಿಕೊಳ್ಳಬಹುದು

**ಮಧ್ಯಸ್ಥಿಕೆ ಕೇಂದ್ರ:**

* ಮಧ್ಯಸ್ಥಿಕೆಯ ವಿವಾದ ಹೊಂದಿರುವ ಪಕ್ಷಕಾರರು ವಿಚಾರಣೆಗೆ ಹೋಗದೇ ತಮ್ಮ ವಿವಾದವನ್ನು ಸೃಜನಾತ್ಮಕವಾಗಿ ಇತ್ಯರ್ಥಪಡಿಸಿಕೊಳ್ಳಲು ಸಹಾಯ ಮಾಡುವ ಒಂದು ಪ್ರಕ್ರಿಯೆಯಾಗಿದೆ. ವಿವಾದ ಇತ್ಯರ್ಥಕ್ಕೆ ಮಧ್ಯಸ್ಥಿಕೆಯ ಎಲ್ಲಾ ಪಕ್ಷಕಾರರು ಹಾಗೂ ಅವರ ವಕೀಲರು ಸಕ್ರೀಯವಾಗಿ ಪಾಲ್ಗೊಳ್ಳುವಂತಹ ಒಂದು ವಿಶಿಷ್ಟ ಅವಕಾಶವನ್ನು ಇದು ಕಲ್ಪಿಸುತ್ತದೆ. ಮಧ್ಯಸ್ಥಿಕೆಯಲ್ಲಿ ನಿರ್ಧಾರ ಕೈಗೊಳ್ಳುವ ಅಧಿಕಾರವು ಯಾವಾಗಲೂ ಪಕ್ಷಕಾರರದ್ದೇ ಆಗಿರುತ್ತದೆ. ಮಧ್ಯಸ್ಥಗಾರರು ವಿವಾದವೆತ್ತಿರುವ ಪಕ್ಷಕಾರರನ್ನು ವಿವಾದಕ್ಕೊಳಗಾಗಿರುವ ವಿಷಯವನ್ನು ಅರ್ಥ ಮಾಡಿಕೊಂಡು ಇತ್ಯರ್ಥಕ್ಕೆ ಬರಲು ಇರುವ ಅಡ್ಡಿ ಆತಂಕಗಳನ್ನು ನಿವಾರಿಸಲು ಪ್ರಯತ್ನ ಮಾಡುತ್ತಾರೆ.

* ಮಧ್ಯಸ್ಥಿಕೆಯು ಸ್ವಪ್ರೇರಿತವಾದದ್ದಾಗಿರುತ್ತದೆ. ಮಧ್ಯಸ್ಥಿಕೆಯು ಯಾವಾಗಲೂ ಪಾರದರ್ಶಕವಾಗಿರುತ್ತದೆ. ಮಧ್ಯಸ್ಥಿಕೆಯಲ್ಲಿ ಹಣ ಮತ್ತು ಸಮಯ ವ್ಯರ್ಥವಾಗುವುದಿಲ್ಲ. ಮಧ್ಯಸ್ಥಿಕೆಯಲ್ಲಿ ನಿಯಮ ಹಾಗೂ ಸಾಕ್ಷ್ಯಕ್ಕೆ ಬದಲಾಗಿ ಪಕ್ಷಕಾರರ ಹಿತಾಸಕ್ತಿಗಳ ಬಗ್ಗೆ ಗಮನ ಹರಿಸಲಾಗುವುದು. ಮಧ್ಯಸ್ಥಿಕೆಯು ಪಕ್ಷಕಾರರು ತಾವೇ ವಿವಾದವನ್ನು ಇತ್ಯರ್ಥಗೊಳಿಸಿಕೊಳ್ಳಲು ಶಕ್ತರಾಗುವಂತೆ ಮಾಡುತ್ತದೆ. ಪ್ರಕರಣದ ಇತ್ಯರ್ಥ ಸಾಧ್ಯವಾಗದಿದ್ದಲ್ಲಿ ನ್ಯಾಯ ನಿರ್ಣಯಕ್ಕಾಗಿ ಅದನ್ನು ಮಧ್ಯಸ್ಥಿಕೆಗಾಗಿ ಕಳುಹಿಸಿದ ನ್ಯಾಯಾಲಯಕ್ಕೆ ವಾಪಾಸ್ಸು ಕಳುಹಿಸಲಾಗುವುದು. ಪ್ರತಿ ತಾಲ್ಲೂಕಿನಲ್ಲಿ ಮಧ್ಯಸ್ಥಿಕೆ ಕೇಂದ್ರವನ್ನು ಸ್ಥಾಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಕಾನೂನು ಸೇವಾ ಸಮಿತಿಯ ಕಾರ್ಯಾಲಯವನ್ನು ಸಂಪರ್ಕಿಸಬಹುದು.

* ವಾಣಿಜ್ಯ ವಿವಾದಗಳನ್ನು ಮಧ್ಯಸ್ಥಿಕೆದಾರರ ಮೂಲಕ ವ್ಯಾಜ್ಯಪೂರ್ವವಾಗಿ ಇತ್ಯರ್ಥಪಡಿಸಲಾಗುವುದು. (Commercial Courts {Pre-institution Mediation and Settlement} Rules,2018).

**ರಾಜೀ ಸಂಧಾನ/ವ್ಯಾಜ್ಯ ಪೂರ್ವ ಪ್ರಕರಣ:**

ಸಾರ್ವಜನಿಕರು ದಿನನಿತ್ಯದ ಕಾನೂನು ಹಾಗೂ ಇತರೆ ಸಮಸ್ಯೆಗಳ ಬಗ್ಗೆ ಸಂಬಂಧಪಟ್ಟ ಕಾರ್ಯಾಲಯಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅವರ ಸಮಸ್ಯೆಗಳನ್ನು ಪರಿಹರಿಸುವ ವ್ಯವಸ್ಥೆ ಮಾಡಲಾಗುವುದು.



**ಸ್ವಪ್ರೇರಿತ ಕಾನೂನು ಸಹಾಯಕರು (Para Legal Volunteers-PLV):-**

ಕಾನೂನು ಸಹಾಯಕರಾಗಿ ತರಬೇತಿ ಪಡೆದವರು ಕಾನೂನು ಸೇವಾ ಸಮಿತಿ ಹಾಗೂ ಅರ್ಹ ನಾಗರೀಕರ ನಡುವೆ ಪರಿಣಾಮಕಾರಿ ಸಮನ್ವಯಕಾರರಾಗಿ ಕಾರ್ಯನಿರ್ವಹಿಸುತ್ತಾರೆ.

ಸ್ವಪ್ರೇರಿತ ಕಾನೂನು ಸಹಾಯಕರು ತಮ್ಮ ಸುತ್ತಮುತ್ತಲಿನ ಪ್ರದೇಶದ ಶೋಷಿತ ಹಾಗೂ ದೌರ್ಜನ್ಯಕ್ಕೊಳಗಾದ ಜನರ ಸೇವೆ ಮಾಡಲು ಅರ್ಪಣಾ ಮನೋಭಾವ ಹೊಂದಿರುತ್ತಾರೆ. ಇವರು ಸರ್ಕಾರದ ವಿವಿಧ ಯೋಜನೆಗಳು, ಆದೇಶಗಳು, ಶಾಸನಗಳು, ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ, ಜನತಾ ನ್ಯಾಯಾಲಯಗಳು, ಪರ್ಯಾಯ ವಿವಾದ ಪರಿಹಾರ ವ್ಯವಸ್ಥೆ, ಉಚಿತ ಕಾನೂನು ಸಹಾಯ ಮತ್ತು ಸೇವೆಗಳ ಬಗ್ಗೆ ಅರಿವನ್ನುಂಟು ಮಾಡುವ ಸೇವೆಯನ್ನು ಸಲಿಸುವುದಲ್ಲದೇ ನಾಗರೀಕರ ಹಕ್ಕುಗಳು ಹಾಗೂ ಹೊಣೆಗಳ ಬಗ್ಗೆ ಶಿಕ್ಷಣ ನೀಡುವುದು, ಸಮಸ್ಯೆಗಳಿಗೆ ಪರಿಹಾರ/ಸಲಹೆ ಕೋರಿ ಕಾನೂನು ಸೇವಾ ಸಮಿತಿಯನ್ನು ಸಂಪರ್ಕಿಸುವ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು, ತಮ್ಮ ಕಾರ್ಯಕ್ಷೇತ್ರದಲ್ಲಿ ನಡೆಯುವ ಕಾನೂನು ಉಲ್ಲಂಘನೆಯ ಹಾಗೂ ಅನ್ಯಾಯದ ಕಾರ್ಯಗಳ ಬಗ್ಗೆ ಪರಿಣಾಮಕಾರಿ ಪರಿಹಾರ ಜರುಗಿಸಲು ಸಾಧ್ಯವಾಗುವಂತೆ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ಕಾನೂನು ಸೇವೆಗಳ ಸಮಿತಿಗೆ ಶೀಘ್ರವಾಗಿ ವರದಿ ಮಾಡುವುದು, ಕಾನೂನು ಅರಿವು ಶಿಬಿರಗಳನ್ನು ಬೇರೆಯವರ ಸಹಯೋಗದೊಂದಿಗೆ ವ್ಯವಸ್ಥೆಗೊಳಿಸುವುದು, ಕಾನೂನು ಸೇವೆಗಳ ಪ್ರಾಧಿಕಾರ/ಕಾನೂನು ಸೇವೆಗಳ ಸಮಿತಿಗಳು ಒದಗಿಸುವ ಸೇವೆಗಳ ಬಗ್ಗೆ ಅರಿವನ್ನುಂಟು ಮಾಡುವುದು, ಮಧ್ಯಸ್ಥಿಕೆ, ರಾಜಿ ಸಂಧಾನ ಮತ್ತು ಜನತಾ ನ್ಯಾಯಾಲಯಗಳ ಮೂಲಕ ವಿವಾದಗಳನ್ನು ಪರಿಹರಿಸಿಕೊಳ್ಳುವುದರಲ್ಲಿ ಇರುವ ಪ್ರಯೋಜನದ ಬಗ್ಗೆ ನಾಗರೀಕರಿಗೆ ತಿಳುವಳಿಕೆ ನೀಡುವುದು, ಖಾಯಂ ಜನತಾ ನ್ಯಾಯಾಲಯಗಳಲ್ಲಿ ಸಾರ್ವಜನಿಕ ಉಪಮಯುಕ್ತ ಸೇವೆಗಳಿಗೆ ಸಂಬಂಧಿಸಿದಂತೆ ಮಾಹಿತಿ ನೀಡುವುದು, ಇವೇ ಮುಂತಾದ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವ ಸ್ವಪ್ರೇರಿತ ಕಾನೂನು ಸಹಾಯಕರು ಸಮಾಜದಲ್ಲಿ ಎಲ್ಲರಿಗೂ ನ್ಯಾಯಾಲಯಕ್ಕೆ ಪ್ರವೇಶಾವಕಾಶ ಸಿಗುವಲ್ಲಿ ಅರ್ಪಣಾ ಮನೋಭಾವದಿಂದ ಸದಾ ಶ್ರಮಿಸುತ್ತಿರುತ್ತಾರೆ.

**ಕಾನೂನು ಅರಿವು:**

ಜನರಲ್ಲಿ ಕಾನೂನು ಅರಿವು ಮೂಡಿಸುವ ನಿಟ್ಟಿನಲ್ಲಿ ರಾಜ್ಯ ಪ್ರಾಧಿಕಾರದಿಂದ ಪ್ರಕಟಿಸಲಾದ ಅನೇಕ ಪುಸ್ತಕಗಳು, ಕಿರು ಹೊತ್ತಿಗೆಗಳು ಹಾಗೂ ಕರಪತ್ರಗಳನ್ನು ಸಾರ್ವಜನಿಕರಿಗೆ ಉಚಿತವಾಗಿ ಇಲ್ಲವೇ ಅತ್ಯಂತ ಕಡಿಮೆ ಬೆಲೆಗೆ ವಿತರಿಸುವುದು. ಎಲ್ಲಾ ವರ್ಗದ ಜನರಿಗೆ ಕಾನೂನು ಕಾರ್ಯಾಗಾರ, ಸರ್ಕಾರೇತರ ಸಂಸ್ಥೆಗಳು, ಸರ್ಕಾರದ ವಿವಿಧ ಇಲಾಖೆಗಳು ಹಾಗೂ ಇತರೆ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ಕಾನೂನು ಅರಿವು-ನೆರವು

ಕಾರ್ಯಕ್ರಮಗಳನ್ನು ಏರ್ಪಡಿಸುವುದರ ಜೊತೆಗೆ ಪ್ರಾಧಿಕಾರದಿಂದ ಕಾನೂನು ಗೀತೆಗಳು, ಧ್ವನಿ ಸುರುಳಿಗಳು, ನಾಟಕಗಳು ಹಾಗೂ ಟೆಲಿ ನಾಟಕಗಳ ಮೂಲಕ ಜನರಲ್ಲಿ ಕಾನೂನಿನ ಬಗ್ಗೆ ಅರಿವನ್ನುಂಟು ಮಾಡಲು ನಿರಂತರವಾಗಿ ಶ್ರಮಿಸಲಾಗುತ್ತಿದೆ

**ಸಂಚಾರಿ ಕಾನೂನು ಸಾಕ್ಷರತಾ ರಥಃ-**

ನಮ್ಮ ನಾಡಿನಲ್ಲಿ ಹಲವು ಜನರಿಗೆ ಕಾನೂನಿನ ಬಗ್ಗೆ ಅರಿವು ಮೂಡಿಸಿಕೊಳ್ಳಬೇಕೆಂಬ ತವಕವಿದ್ದರೂ ಸಹ ತಮ್ಮ ಜೀವನಾಧಾರವಾದ ಹಣಗಳಿಸುವುದಕ್ಕಾಗಿ ಬಿಡುವಿಲ್ಲದೆ ದುಡಿಯಬೇಕಿದ್ದು, ಕಾನೂನು ಬಗ್ಗೆ ಮಾಹಿತಿ ಪಡೆಯಲು ಅದಕ್ಕಾಗಿ ಇರುವ ಕೇಂದ್ರಗಳಿಗೆ ಭೇಟಿ ನೀಡಲು ಅಶಕ್ತರಾಗಿರುತ್ತಾರೆ. ಇಂತಹ ಜನರನ್ನು ಗಮನದಲ್ಲಿರಿಸಿಕೊಂಡು ರಾಜ್ಯ ಪ್ರಾಧಿಕಾರದ ಕಾನೂನು ಸಾಕ್ಷರತಾ ರಥಗಳ (ಬಸ್) ಮೂಲಕ ಅವರುಗಳಿಗೆ ಕಾನೂನಿನ ಬಗ್ಗೆ ಮಾಹಿತಿ ನೀಡಲು ಕ್ರಮ ಕೈಗೊಳ್ಳಲಾಗುವುದು ಈ ಕುರಿತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಜಿಲ್ಲೆಯ

ವ್ಯಾಪ್ತಿಯಲ್ಲಿ ಎಲ್ಲಾ ತಾಲ್ಲೂಕು ಕಾನೂನು ಸೇವಾ ಸಮಿತಿಗಳ ಮೂಲಕ ಹಳ್ಳಿ ಹಳ್ಳಿಗೆ ಸಂಚರಿಸುವ ಮೂಲಕ ಸ್ಥಳೀಯ ನ್ಯಾಯಾಧೀಶರು, ವಕೀಲರು ಹಾಗೂ ಇತರರು ಕಾನೂನು ಪ್ರಸಾರದ ಮೂಲಕ ಕಾಲಕಾಲಕ್ಕೆ ಸಾಕ್ಷರತಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜನಸಾಮಾನ್ಯರನ್ನು ಕಾನೂನು ಸಾಕ್ಷರರನ್ನಾಗಿ ಮಾಡುವಲ್ಲಿ ಯಶಸ್ಸನ್ನು ಸಾಧಿಸಲಾಗುತ್ತಿದೆ.



**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ವಿಳಾಸಃ**

ತಾಲ್ಲೂಕು ನ್ಯಾಯಾಲಯದ ಆವರಣ, ಹೊಳಲ್ಕೆರೆ.

ದೂರವಾಣಿ ಸಂಖ್ಯೆ:
08191 -275084

ಮಾನ್ಯ ಅಧ್ಯಕ್ಷರ ಆದೇಶಾನುಸಾರ

11/6/2024

ಸದಸ್ಯ ಕಾರ್ಯದರ್ಶಿ,
ತಾಲ್ಲೂಕು ಕಾನೂನು ಸೇವಾ ಸಮಿತಿ,
ಹೊಳಲ್ಕೆರೆ.

# RIGHT TO INFORMATION ACT

As per Section 4(1)(a) of Right to Information Act, every public Authority shall maintain all its records duly catalouged and indexed in a manner and the form which facilitates the right to information under this act and ensure that all records that are appropriate to be computerized are, within a reasonable time and subject to availability of resources, computerized and connected through a network all over the Country on different systems so that access to such records is facilitated.

We are working at the same and will be uploaded in the website as early as possible. However, the information which is in the office at present is uploaded in the website.

**Information Under Section 4(1) A of the RTI Act, 2005.**